ಸಂ/ಜಿಸಕಅ/ಡಿ3/ಸಿಬ್ಬಂದಿ/ಸಿಆರ್36/16-17

ಉಪನಿರ್ದೇಶಕರ ಕಛೇರಿ,
ಸಮಾಜ ಕಲ್ಯಾಣ ಇಲಾಖೆ,
ಹಾಸನ ಜಿಲ್ಲೆ, ಹಾಸನ. ದಿ:12-1-2018.

## ಸೂಚನಾ ಪತ್ರ

ವಿಷಯ:- ಹಾಸನ ಜಿಲ್ಲೆ, ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಗ್ರೂಪ್ 'ಡಿ' ವೃಂದದ ಅಡುಗೆ ಸಹಾಯಕರ ಹುದ್ದೆಗೆ ನೇರ ನೇಮಕಾತಿಗೆ ಸಂಬಂಧಿಸಿದಂತೆ ಸ್ಥಳ ಆಯ್ಕೆಗಾಗಿ ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ನಡೆಸುವ ಬಗ್ಗೆ.

ಉಲ್ಲೇಖ:1)ಸರ್ಕಾರಿ ಆದೇಶದ ಸಂಖ್ಯೆ:ಸಕಇ 268 ಪಕಸೇ 2016 ದಿ:29-9-2016.
2)ಜಿಲ್ಲಾಧಿಕಾರಿಗಳು, ಹಾಸನ ರವರ ಇದೇ ಸಮಸಂಖ್ಯೆ ಅಧಿಸೂಚನೆ ದಿ:20-10-16.
3)ದಿ:3-8-2017 ರಂದು ಜಿಲ್ಲಾಧಿಕಾರಿಗಳು, ಹಾಸನ ಹಾಗೂ ಅಧ್ಯಕ್ಷರು, ಜಿಲ್ಲಾ ಮಟ್ಟದ 'ಡಿ' ವೃಂದದ ನೇಮಕಾತಿ ಪ್ರಾಧಿಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.
4)ಸರ್ಕಾರದ ಆದೇಶ ಸಂ/ಸಕಇ 15 ಪಕಸೇ 2018, ಬೆಂಗಳೂರು, ದಿ:12-1-2018.

*********

ಹಾಸನ ಜಿಲ್ಲೆ, ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಗ್ರೂಪ್ 'ಡಿ' ವೃಂದದ ಅಡುಗೆ ಸಹಾಯಕರ ಹುದ್ದೆಗೆ ನೇರ ನೇಮಕಾತಿಗೆ ಸಂಬಂಧಿಸಿದಂತೆ ಅಭ್ಯರ್ಥಿಗಳ ಕೌನ್ಸಿಲಿಂಗ್ ನಡೆಸಲು ಉಲ್ಲೇಖ (4)ರ ಆದೇಶದಲ್ಲಿ ಆದೇಶಿಸಲಾಗಿರುವುದರಿಂದ ದಿ:18-1-2018 ರಂದು ಬೆಳಿಗ್ಗೆ 9.00 ಗಂಟೆಯಿಂದ ಮಧ್ಯಾಹ್ನ 12.00 ರವರೆಗೆ ಕೌನ್ಸಿಲಿಂಗ್ ನಡೆಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು **ದಿ:18-1-2018 ರಂದು ಬೆಳಿಗ್ಗೆ 8.30 ಗಂಟೆಗೆ ಸರಿಯಾಗಿ ಉಪ ನಿರ್ದೇಶಕರ ಕಛೇರಿ, ಡಾ:ಬಿ.ಆರ್.ಅಂಬೇಡ್ಕರ್ ಭವನ, ಹಾಸನ** ಇಲ್ಲಿ ಹಾಜರಿರುವುದು. ಕೌನ್ಸಿಲಿಂಗ್‌ಗೆ ಹಾಜರಾಗದಿದ್ದಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಪಟ್ಟಿಯಿಂದ ಕೈಬಿಡಲಾಗುವುದು.

ಅಭ್ಯರ್ಥಿಗಳು ಹಾಜರಾಗುವಾಗ ಸಂಬಂಧಪಟ್ಟ ಜಿಲ್ಲಾ ಶಸ್ತ್ರ ಚಿಕಿತ್ಸಕರಿಂದ ಪಡೆದಿರುವ ದೇಹ ದಾರ್ಢ್ಯತೆ ಬಗ್ಗೆ ಪಡೆದಿರುವ ಮೂಲ ಪ್ರಮಾಣ ಪತ್ರದೊಂದಿಗೆ ಹಾಜರಾಗುವುದು.

ಸದಸ್ಯ ಕಾರ್ಯದರ್ಶಿಗಳು
ಜಿಲ್ಲಾ ಮಟ್ಟದ ಗ್ರೂಪ್-ಡಿ ನೇಮಕಾತಿ
ಪ್ರಾಧಿಕಾರಿ ಹಾಗೂ ಉಪ ನಿರ್ದೇಶಕರು,
ಸಮಾಜ ಕಲ್ಯಾಣ ಇಲಾಖೆ,
ಹಾಸನ ಜಿಲ್ಲೆ, ಹಾಸನ